# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 154 (240) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 12.08.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ರಾಸಾಯನಿಕ ಮತ್ತು ರಸಗೊಬ್ಬರ ಬಳಕೆಯಲ್ಲಿ ಏಷ್ಯದಲ್ಲಿ 2ನೇ ಸ್ಥಾನದಲ್ಲಿದ್ದು ಇಲ್ಲಿ ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ ಸ್ಥಾಪನೆಯಾಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯ ಸರ್ಕಾರವು ನೇರವಾಗಿ ಯಾವುದೇ ಕೈಗಾರಿಕೆಗಳನ್ನು ಸ್ಥಾಪಿಸುವುದಿಲ್ಲ.<br><br>ಆದರೆ, ಬೇಡಿಕೆ ಅನುಸಾರ ಯಾವುದಾದರೂ ಖಾಸಗಿ ಕಂಪನಿಗಳು ಸಿಂಧನೂರು ತಾಲ್ಲೂಕಿನಲ್ಲಿ ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ ಸ್ಥಾಪಿಸಲು ಮುಂದೆ ಬಂದಲ್ಲಿ, ಇಲಾಖೆಯು ಆ ಯೋಜನೆಗೆ ಅಗತ್ಯ ಬೆಂಬಲ ಸೇವೆಯನ್ನು ಒದಗಿಸುತ್ತದೆ ಮತ್ತು ಕೈಗಾರಿಕಾ ನೀತಿ 2025-30 ರಲ್ಲಿ ಲಭ್ಯವಿರುವ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನು ನೀಡಿ ಉತ್ತೇಜಿಸಲಾಗುತ್ತದೆ. |
| ಆ | ಅದಕ್ಕಾಗಿ ಮೂಲಭೂತ ಸೌಕರ್ಯಗಳಾದ 150ಎ ಸಾರಿಗೆ ರೈಲ್ವೆ ಸಂಪರ್ಕ ಗುತ್ತಿ-ಅಂಕೋಲಾ ಹೆದ್ದಾರಿ ಸೊಲ್ಲಾಪುರ ಹೆದ್ದಾರಿ ಸಂಪರ್ಕ ಹೊಂದಿದ್ದು ಅಲ್ಲದೆ ಸಿಂಧನೂರು ತಾಲ್ಲೂಕು ಬೆಂಗಳೂರು, ಹೈದರಬಾದ್, ಬಿಜಾಪುರ, ಬೀದರ್ ಸ್ಥಳಗಳಿಗೆ ಮುಖ್ಯ ಕೇಂದ್ರ ಮಾರ್ಗವಾಗಿರುವುದರಿಂದ ಸಿಂಧನೂರು ತಾಲ್ಲೂಕಿಗೆ ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | |
| ಇ | ಸಿಂಧನೂರು ನಗರದಿಂದ ಸುಮಾರು 100 ಕಿ.ಮೀ ಅಂತರದಲ್ಲಿ ಮಧ್ಯಮ ಹಾಗೂ ಬೃಹತ್ ಕೈಗಾರಿಕೆಗಳು ಇಲ್ಲದಿರುವುದರಿಂದ ಈ ಭಾಗದಲ್ಲಿ ಕೈಗಾರಿಕೆಗಳನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲು ಕ್ರಮ ವಹಿಸಲಾಗುವುದು? | |

ಕಡತ ಸಂಖ್ಯೆ ಸಿಐ 239 ಎಸ್‌ಪಿಐ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು